# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಬಿ.ಎಂ.ಪಂಪಯ್ಯ, ಅಂದಿನ ಮುಖ್ಯ ಲೆಕ್ಕಾಧಿಕಾರಿ (ಪ್ರಭಾರ), ಜಿಲ್ಲಾ ಪಂಚಾಯತ್, ಬಳ್ಳಾರಿ ಇವರ ಅಮಾನತ್ತನ್ನು ತೆರವುಗೊಳಿಸುವ ಬಗ್ಗೆ-ಆದೇಶ.

**ಓದಲಾಗಿದೆ:-**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ ಇವರ ಪತ್ರ ಸಂಖ್ಯೆ. ಜಿಪಂಬ/ ಮುಲೆಅ/8003/2010-11, ದಿನಾಂಕ. 22-08-2011
2. ಸರ್ಕಾರದ ಆದೇಶ ಸಂಖ್ಯೆ. ಗ್ರಾಅಪ 31 ಇಎನ್‌ಕ್ಯೂ 2011, ದಿನಾಂಕ. 24-10-2011.
3. ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ಮಧ್ಯಂತರ ತೀರ್ಪಿನ ದಿನಾಂಕ. 02-11-2011 ಮತ್ತು 03-11-2011
4. ಶ್ರೀ ಬಿ.ಎಂ.ಪಂಪಯ್ಯ, ಲೆಕ್ಕಾಧಿಕಾರಿ (ಅಮಾನತ್ತಿನಲ್ಲಿರುವ) ಇವರ ಮನವಿ ದಿನಾಂಕ. 02-12-2011.

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ. 22-08-2011ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ ಇವರು ಶ್ರೀ ಕೃಷ್ಣದೇವರಾಯರ 500ನೇ ಪೀಠಾರೋಹಣ ಸ್ಮರಣಾರ್ಥ ಪಟ್ಟಾಭಿಷೇಕ ಆಚರಣೆ ಸಂಬಂಧ ಹಂಪೆಯಲ್ಲಿ 75 ಎಂ.ಪಿ.ಸಿ. (Mobile Portable Chemical) ಟಾಯ್‌ಲೆಟ್‌ಗಳನ್ನು ವಿವಿಧ ಸ್ಥಳಗಳಲ್ಲಿ ಬಾಡಿಗೆ ಆಧಾರದ ಮೇಲೆ ಮೆ: ಸಾರಪ್ಲಾಸ್ಟ್ ಪ್ರೈವೇಟ್ ಲಿಮಿಟೆಡ್, ಬೆಂಗಳೂರು ಇವರಿಂದ ಪಡೆದು ಶೌಚಾಲಯ ವ್ಯವಸ್ಥೆಯನ್ನು ಮಾಡಿದ್ದು, ಈ ವ್ಯವಸ್ಥೆಯನ್ನು ಇನ್ನು 3 ದಿನಗಳಿಗೆ ಹೆಚ್ಚುವರಿಯಾಗಿ ಮುಂದುವರೆಸಿ ಒಟ್ಟು 7 ದಿನಗಳವರೆಗೆ ಹಣ ಪಾವತಿ ಮಾಡಲಾಗಿದೆಯೆಂದು, ಮತ್ತು ಈ ವ್ಯವಸ್ಥೆಯನ್ನು ಟೆಂಡರ್ ಮೂಲಕ ನೀಡದೇ ದರಪಟ್ಟಿ ಮೂಲಕ ಈ ವ್ಯವಸ್ಥೆಯನ್ನು ಕಲ್ಪಿಸಲು ಆದೇಶ ನೀಡಲಾಗಿರುತ್ತದೆ. ಅಲ್ಲದೆ, ಮೇಲ್ಕಂಡ ಮೊತ್ತವನ್ನು ಸಂಪೂರ್ಣ ನೈರ್ಮಲ್ಯ ಆಂದೋಲನ ಯೋಜನೆಯಡಿಯಲ್ಲಿ ಐ.ಇ.ಸಿ. ಚಟುವಟಿಕೆಗಳ ಅನುದಾನದಿಂದ ಪಾವತಿ ಮಾಡಲಾಗಿದ್ದು, ಈ ಪಾವತಿಯು ಮಾರ್ಗಸೂಚಿಗಳ ಉಲ್ಲಂಘನೆಯಾಗಿರುತ್ತದೆ ಹಾಗೂ ಯಾವುದೇ ಸಂಗ್ರಹಣೆಯ ನಿಯಮಗಳನ್ನು ಅನುಸರಿಸದೇ ಪಾವತಿ ಮಾಡಲಾಗಿರುತ್ತದೆಯೆಂದು ಹಾಗೂ ಸಂಪೂರ್ಣ ನೈರ್ಮಲ್ಯ ಆಂದೋಲನ ಯೋಜನೆಯ ಮಾರ್ಗಸೂಚಿಗಳನ್ನು ಉಲ್ಲಂಘಿಸಿ ಸಂಗ್ರಹಣೆ ನಿಯಮಗಳನ್ನು ಪಾಲಿಸದೇ ರೂ. 20.36 ಲಕ್ಷಗಳನ್ನು ವೆಚ್ಚ ಮಾಡಿರುವ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಬಳ್ಳಾರಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹೊಸಪೇಟೆ ಮತ್ತು ಸಂಬಂಧಿಸಿದ ಕಿರಿಯ ಇಂಜಿನಿಯರ್‌ಗಳನ್ನು ಕೂಡಲೇ ಅಮಾನತ್ತುಗೊಳಿಸಿ ಶಿಸ್ತು ಕ್ರಮ ಕೈಗೊಳ್ಳಬೇಕೆಂದು ಹಾಗೂ ಮುಖ್ಯ ಲೆಕ್ಕಾಧಿಕಾರಿಗಳ ಮೇಲೆ ಶಿಸ್ತು ಕ್ರಮ ಕೈಗೊಳ್ಳಬೇಕೆಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿರವರು ಕೋರಿದ್ದರು.

-----2

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ. 24-10-2011ರ ಸರ್ಕಾರದ ಆದೇಶದಲ್ಲಿ ಈ ಕೆಳಕಂಡ ಅಧಿಕಾರಿಗಳನ್ನು ಇಲಾಖಾ ವಿಚಾರಣೆ ಬಾಕಿಯಿಟ್ಟು ಸೇವೆಯಿಂದ ಅಮಾನತ್ತುಗೊಳಿಸಲಾಗಿತ್ತು:-

(i) *ಶ್ರೀ ಡಿ. ವೆಂಕಟರಮಣ, ಅಂದಿನ ಕಾರ್ಯಪಾಲಕ ಇಂಜಿನಿಯರ್ (ಪ್ರಭಾರ) ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಬಳ್ಳಾರಿ (ಪ್ರಸ್ತುತ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಬಳ್ಳಾರಿ).*

(ii) *ಶ್ರೀ ಡಿ.ವಿ.ವೆಂಕಟರಾಜು, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹೊಸಪೇಟೆ*

(iii) *ಶ್ರೀ ಪಿ.ಎಸ್.ಪರಶುರಾಮು, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹೊಸಪೇಟೆ.*

(iv) *ಶ್ರೀ ಬಿ.ಎಂ.ಪಂಪಯ್ಯ, ಮುಖ್ಯ ಲೆಕ್ಕಾಧಿಕಾರಿ (ಪ್ರಭಾರ), ಜಿಲ್ಲಾ ಪಂಚಾಯತ್, ಬಳ್ಳಾರಿ*

ದಿನಾಂಕ. 24-10-2011ರ ಸರ್ಕಾರದ ಆದೇಶವನ್ನು ಶ್ರೀ ಡಿ.ವೆಂಕಟರಮಣ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ಹಿಂದಿನ ಪ್ರಭಾರ ಕಾರ್ಯಪಾಲಕ ಇಂಜಿನಿಯರ್), ಶ್ರೀ ಡಿ.ವಿ.ವೆಂಕಟರಾಜು, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹಾಗೂ ಶ್ರೀ ಪಿ.ಎಸ್.ಪರಶುರಾಮ್, ಸಹಾಯಕ ಇಂಜಿನಿಯರ್ ಇವರುಗಳು ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯಲ್ಲಿ ಅರ್ಜಿ ಸಂಖ್ಯೆ. 7076, 7077 ಮತ್ತು 7078/2011 ರ ಮೂಲಕ ಪ್ರಶ್ನಿಸಿದ್ದರು.

ಮೇಲೆ ಕ್ರಮ ಸಂಖ್ಯೆ. (3)ರಲ್ಲಿ ಓದಲಾದ ದಿನಾಂಕ.02-11-2011 ಮತ್ತು 03-11-2011ರಲ್ಲಿ ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯು ದಿನಾಂಕ. 24-10-2011ರ ಸರ್ಕಾರದ ಆದೇಶಕ್ಕೆ ಅವರ ಮಟ್ಟಿಗೆ ಸಂಬಂಧಿಸಿಂತೆ ಒಂದು ತಿಂಗಳ ತಡೆಯಾಜ್ಞೆಯನ್ನು ನೀಡಿ, ಅವರುಗಳನ್ನು ತಕ್ಷಣ ಕರ್ತವ್ಯಕ್ಕೆ ತೆಗೆದುಕೊಳ್ಳಬೇಕೆಂದು ಆದೇಶಿಸಿದ್ದರ ಮೇರೆಗೆ ಸದರಿಯವರುಗಳನ್ನು ನ್ಯಾಯ ಮಂಡಳಿಯ ಅಂತಿಮ ತೀರ್ಮಾನಕ್ಕೆ ಒಳಪಟ್ಟು ಆಯಾಯಾ ಹುದ್ದೆಗಳಲ್ಲಿ ಅವರುಗಳನ್ನು ಪುನರ್ ಸ್ಥಾಪಿಸಬೇಕೆಂದು ದಿನಾಂಕ: 17.11.2011ರ ಸರ್ಕಾರದ ಪತ್ರದ ಮೂಲಕ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ ರವರಿಗೆ ತಿಳಿಸಲಾಗಿತ್ತು.

ಮೇಲೆ ಕ್ರಮ ಸಂಖ್ಯೆ. (4)ರಲ್ಲಿ ಓದಲಾದ ದಿನಾಂಕ. 02-12-2011ರ ಮನವಿಯಲ್ಲಿ ಶ್ರೀ ಬಿ. ಎಂ. ಪಂಪಯ್ಯ, ಲೆಕ್ಕಾಧಿಕಾರಿ (ಅಮಾನತ್ತಿನಲ್ಲಿರುವ) ಇವರೂ ಸಹ ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯಲ್ಲಿ ಅರ್ಜಿ ಸಂಖ್ಯೆ:7605/2011 ಅನ್ನು ಸಲ್ಲಿಸಿದ್ದು, ಇವರಿಗೂ ಮಾನ್ಯ ನ್ಯಾಯಾಧಿಕರಣವು ದಿನಾಂಕ:24.10.2011ರಂದು ಅಮಾನತ್ತುಗೊಳಿಸಿರುವ ಸರ್ಕಾರದ ಆದೇಶಕ್ಕೆ ತಡೆಯಾಜ್ಞೆ ನೀಡಿರುವುದರಿಂದ,- ಸೇವೆಯಲ್ಲಿ ಪುನರ್ ಸ್ಥಾಪನೆ ಮಾಡಬೇಕೆಂದು ಕೋರಿರುತ್ತಾರೆ.

-----3

ಸರ್ಕಾರವು ಶ್ರೀ ಬಿ.ಎಂ.ಪಂಪಯ್ಯ, ಲೆಕ್ಕಾಧಿಕಾರಿ (ಹಿಂದಿನ ಪ್ರಭಾರಿ ಮುಖ್ಯ ಲೆಕ್ಕಾಧಿಕಾರಿ) ಇವರ ಮನವಿಯನ್ನು ಕೂಲಂಕಷವಾಗಿ ಪರಿಶೀಲಿಸಿ ಸದರಿ ಅಧಿಕಾರಿಯನ್ನು ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ಅಂತಿಮ ತೀರ್ಪಿಗೊಳಪಟ್ಟು ಇಲಾಖಾ ವಿಚಾರಣೆಯನ್ನು ಕಾಯ್ದಿರಿಸಿ ಸೇವೆಯಲ್ಲಿ ಪುನರ್ ಸ್ಥಾಪಿಸಿ ಅವರ ಸೇವೆಯನ್ನು ಮಾತೃ ಇಲಾಖೆಗೆ ಹಿಂದಿರುಗಿಸಲು ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 31 ಇಎನ್‌ಕ್ಯೂ 2011, ಬೆಂಗಳೂರು, ದಿನಾಂಕ: 21-12-2011</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಅಪೀಲು) ನಿಯಮಗಳು, 1957ರ ನಿಯಮಾವಳಿಗಳ ನಿಯಮ 10(5)(ಸಿ) ರಡಿಯಲ್ಲಿ ಪ್ರದತ್ತವಾದ ಅಧಿಕಾರದನ್ವಯ ಶ್ರೀ ಬಿ.ಎಂ.ಪಂಪಯ್ಯ, ಲೆಕ್ಕಾಧಿಕಾರಿ ಇವರನ್ನು ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ಅಂತಿಮ ತೀರ್ಪಿಗೊಳಪಟ್ಟು ಇಲಾಖಾ ವಿಚಾರಣೆಯನ್ನು ಕಾಯ್ದಿರಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಅವರ ಅಮಾನತ್ತನ್ನು ತೆರವುಗೊಳಿಸಿ, ಸೇವೆಯಲ್ಲಿ ಪುನರ್ ಸ್ಥಾಪಿಸಿದೆ.

ಮುಂದುವರೆದು, ಶ್ರೀ ಬಿ.ಎಂ.ಪಂಪಯ್ಯ, ಲೆಕ್ಕಾಧಿಕಾರಿ ಇವರ ಸೇವೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಅವರ ಮಾತೃ ಇಲಾಖೆಯಾದ ರಾಜ್ಯ ಲೆಕ್ಕಪತ್ರ ಇಲಾಖೆಗೆ ಹಿಂದಿರುಗಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎನ್.ವೈ.ಸಾಗರ), 21/12/2011
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:-

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ / ಜಲ ಸಂಪನ್ಮೂಲ ಇಲಾಖೆ.
3. ನಿರ್ದೇಶಕರು, ರಾಜ್ಯ ಲೆಕ್ಕಪತ್ರ ಇಲಾಖೆ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ.
5. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
6. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡ (ದಕ್ಷಿಣ), ಕೆ.ಆರ್.ಸರ್ಕಲ್, ಬೆಂಗಳೂರು.
7. ಶ್ರೀ ಬಿ.ಎಂ.ಪಂಪಯ್ಯ, ಲೆಕ್ಕಾಧಿಕಾರಿ (ಅಮಾನತ್ತಿನಲ್ಲಿರುವ) ಇವರಿಗೆ - ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ ಇವರ ಮುಖಾಂತರ.
8. ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ , (ಸೇ-ಎ, ಬಿ ಮತ್ತು ಸಿ)
9. ಗ್ರಾ.ಅ.ಪಂ. ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್)/ ಉಪ ಕಾರ್ಯದರ್ಶಿಯವರು (ಆಡಳಿತ) ಇವರ ಆಪ್ತ ಕಾರ್ಯದರ್ಶಿ/ ಆಪ್ತ ಸಹಾಯಕರಿಗೆ.
10. ಮಾಹಿತಿ ಕೇಂದ್ರ : ಹೆಚ್ಚುವರಿ ಪ್ರತಿ: ರಕ್ಷಾ ಕಡತ : ಕಂಪ್ಯೂಟರ್ ಸೆಲ್ : ಮೇಲ್ವಿಚಾರಕರು, ಗಣಕಯಂತ್ರ ಕೋಶ ವಿಭಾಗ.